# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 490

ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್. ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.

ಉತ್ತರಿಸಬೇಕಾದ ದಿನಾಂಕ : 11.03.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅಡಿಕೆ ತೋಟಗಳಿಗೆ ವ್ಯಾಪಕವಾಗಿ ಹರಡಿದ ಎಲೆಚುಕ್ಕೆ ರೋಗದಿಂದಾಗಿ ದೊಡ್ಡ ಪ್ರಮಾಣದಲ್ಲಿ ಬೆಳೆ ನಷ್ಟವಾಗಿರುವುದರಿಂದ ಅಡಿಕೆ ಬೆಳೆಗಾರರು ಆರ್ಥಿಕ ಸಂಕಷ್ಟಕ್ಕಿಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ: | ಬಂದಿದೆ. |
| ಆ) | ಬಂದಿದ್ದಲ್ಲಿ, ಈ ರೋಗ ಮಳೆಗಾಲದ ಮಧ್ಯದಲ್ಲಿ ಕಾಣಿಸಿಕೊಂಡು ದಿನದಿಂದ ದಿನಕ್ಕೆ ಹೆಚ್ಚುತ್ತಾ ಹೋದದ್ದು ಮತ್ತು ಅದಕ್ಕೆ ಯಾವುದೇ ನಿಯಂತ್ರಣದ ಕ್ರಮಗಳು ಇಲ್ಲದೇ ಹೋದ ಕಾರಣದಿಂದಾಗಿ ಆಗ ಹಸಿ ಅಡಿಕೆ ಉದುರಿದ್ದು ಮಾತ್ರವಲ್ಲದೆ ಅವಧಿಗೂ ಮುಂಚೆ ಹಣ್ಣಾಗತೊಡಗಿದ್ದು ಅಪಾರ ಬೆಳೆ ನಷ್ಟಕ್ಕೆ ಕಾರಣವಾಗಿದ್ದು. ಆ ಕಾರಣದಿಂದಾಗಿ ಸಂಕಷ್ಟಕ್ಕೆ ಸಿಲುಕಿರುವ ಅಡಿಕೆ ಬೆಳೆಗಾರರ | **ಅಡಿಕೆ ಎಲೆ ಚುಕ್ಕೆ ರೋಗ ತಗಲಿ ಒಟ್ಟಾರೆ 53,977 ಹೆಕ್ಟೇರ್ ಪ್ರದೇಶದಲ್ಲಿ ನಷ್ಟ ಉಂಟಾಗಿರುವುದಾಗಿ ಅಂದಾಜಿಸಲಾಗಿದೆ.**<br><br>**ಅಡಿಕೆ ಬೆಳೆಗಾರರ ನೆರವಿಗೆ ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗಿದೆ:-**<br>1. 2023-24ನೇ ಸಾಲಿನಲ್ಲಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4,000.00 ಗಳಂತೆ 1.5 ಹೆಕ್ಟೇರ್ ವರೆಗೆ ಪ್ರತಿ ಫಲಾನುಭವಿಗೆ ಗರಿಷ್ಠ ರೂ.6,000/-ಗಳ ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ವಿತರಿಸಲಾಗಿದೆ. 6250 ಹೆಕ್ಟೇರ್ ಪ್ರದೇಶದಲ್ಲಿ ಒಟ್ಟು ರೂ. 250.00ಲಕ್ಷಗಳ ಅನುದಾನವನ್ನು ವಿನಿಯೋಗಿಸಿ 12300 ಅಡಿಕೆ ಬೆಳೆಗಾರರಿಗೆ ಸಹಾಯಧನವನ್ನು ನೀಡಲಾಗಿರುತ್ತದೆ. |

| | | |
|---|---|---|
| | ನೆರವಿಗೆ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು: | 2. ಅಡಿಕೆ ಬೆಳೆಗಾರರಿಗೆ ಬೆಳೆಯ ಸಿಂಪರಣೆಗಾಗಿ ದೋಟಿ ಖರೀದಿಸಲು ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ 1,201 ಫಲಾನುಭವಿಗಳಿಗೆ ರೂ.366.68 ಲಕ್ಷಗಳ ಸಹಾಯಧನ ನೀಡಲಾಗಿದೆ.<br><br>3. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ತಜ್ಞರ ಸಹಯೋಗದೊಂದಿಗೆ ತರಬೇತಿ, ಕಾರ್ಯಾಗಾರಗಳು ಹಾಗೂ ಪ್ರಾತ್ಯಕ್ಷತೆಗಳನ್ನು ಏರ್ಪಡಿಸುವುದರ ಮೂಲಕ ಅರಿವು ಮೂಡಿಸಲಾಗುತ್ತಿದೆ.<br><br>4. ಅಡಿಕೆ ಎಲೆ ಚುಕ್ಕೆ ರೋಗ ಹಾಗೂ ಹಳದಿ ಎಲೆ ರೋಗಗಳ ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡದ ಸಮಿತಿಯು ಫೈಟೋಸ್ಯಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಪೋಷಕಾಂಶಗಳ ನಿರ್ವಹಣೆ, ಸಸ್ಯ ಸಂರಕ್ಷಣೆ ಕ್ರಮಗಳ ಅಳವಡಿಕೆ ಹಾಗೂ ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಶಿಫಾರಸ್ಸು ಮಾಡಿದೆ. ಇದರನ್ವಯ ಎಲೆ ಚುಕ್ಕೆ ರೋಗದಿಂದ ಹಾನಿಯಾಗಿರುವ ಸುಮಾರು 53977 ಹೆಕ್ಟೇರ್ ಪ್ರದೇಶಕ್ಕೆ ರೂ.225.73 ಕೋಟಿಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನ 60:40 ರ ಅನುಪಾತದಲ್ಲಿದೆ ಹಾಗೂ ಈ ಕಾರ್ಯಕ್ರಮವು 2 ವರ್ಷಗಳ ಅವಧಿಯದ್ದಾಗಿರುತ್ತದೆ. ಇದರಲ್ಲಿ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನ ರೂ.37 ಕೋಟಿಗಳನ್ನು (60%) ಬಿಡುಗಡೆ |
| ಇ) | ಎಲೆಚುಕ್ಕೆ ರೋಗ ನಿಯಂತ್ರಣಕ್ಕೆ ಕೂಡಲೇ ಸಂಶೋಧನಾ ಪರಿಹಾರ ಕಂಡು ಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ವಹಿಸಲಿರುವ ಕ್ರಮಗಳೇನು? | |

| | | |
|---|---|---|
| | | ಮಾಡಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಮಾರ್ಗಸೂಚಿ ಅನುಸಾರ ಅನುಷ್ಠಾನಗೊಳಿಸಲು ಸೂಚಿಸಿದೆ. ರಾಜ್ಯ ಸರ್ಕಾರದ ಪಾಲಿನ ರೂ.26.44 ಕೋಟಿಗಳನ್ನು (40%) ಬಿಡುಗಡೆಗೊಳಿಸಲು ಕ್ರಮಕೈಗೊಳ್ಳಲಾಗಿದೆ.<br><br>5. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅಡಿಕೆ ಸೇರಿದಂತೆ ಎಲ್ಲಾ ತೋಟಗಾರಿಕೆ ಬೆಳಗಳಲ್ಲಿ ಸಸ್ಯ ಸಂರಕ್ಷಣೆ ಕೈಗೊಳ್ಳಲು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಲ್ಲಿ ಪ್ರತಿ ಹೆಕ್ಟೇರ್‌ಗೆ ರೂ.1,200/- ಗಳಂತೆ ಗರಿಷ್ಟ 4 ಹೆಕ್ಟೇರ್ ವರೆಗೆ ರೂ.4,800/-ಗಳ ಸಹಾಯಧನ ನೀಡಲಾಗುತ್ತದೆ. ಕೇಂದ್ರ ಸರ್ಕಾರದ ವೈಜ್ಞಾನಿಕ ತಂಡದ ಶಿಫಾರಸ್ಸಿನಂತೆ ಸಸ್ಯ ಸಂರಕ್ಷಣಾ ಔಷಧಿಗಳ ಹಾಗೂ ಸಿಂಪಡಣೆಗೆ ಸಹಾಯಧನ, ಫೈಟೋಸ್ಯಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು) ಪೋಷಕಾಂಶಗಳ ನಿರ್ವಹಣೆ ಮತ್ತು ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳ ಒಟ್ಟಾರೆ ಅನುಷ್ಟಾನಕ್ಕಾಗಿ ಪ್ರತಿ ಹೆಕ್ಟೇರ್‌ಗೆ ರೂ.41,820/-ಗಳ ಅಗತ್ಯವಿರುತ್ತದೆ. ಆದುದರಿಂದ ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣಕ್ಕೆ ಕೇಂದ್ರ ಸರ್ಕಾರದ ಸೂಚನೆಯನ್ನು ಮರುಪರಿಶೀಲಿಸಿ ಅನುಮತಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿರುತ್ತದೆ.<br><br>6. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ "INNOVATIVE RESEARCH COMPONENT" ಅಡಿಯಲ್ಲಿ ರೂ. 689/-ಲಕ್ಷಗಳ ವೆಚ್ಚದಲ್ಲಿ ಸಂಶೋಧನೆ ಕೈಗೊಳ್ಳಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |

7. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ 2023-24 ನೇ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಅಡಿಕೆ ಎಲೆ ಚುಕ್ಕೆ ರೋಗಕ್ಕೆ ಕಾರಣವಾದ ರೋಗಾಣುವಿನ ಪತ್ತೆ ಹಚ್ಚುವಿಕೆ, ಇತರೆ ತೋಟಗಾರಿಕೆ ಬೆಳೆಗಳಿಂದ ಎಲೆ ಚುಕ್ಕೆ ರೋಗಕ್ಕೆ ಕಾರಣವಾಗುವ ರೋಗಾಣುವಿನ ಪತ್ತೆ ಹಚ್ಚುವಿಕೆ, ಸಸ್ಯ ಸಂರಕ್ಷಣೆ ಔಷಧಿಗಳು, ಜೈವಿಕ ನಿರೋದಕಗಳ ವಿವಿಧ ಪ್ರಮಾಣ (dosage) ಗಳಿಂದ ರೋಗವನ್ನು ನಿಯಂತ್ರಿಸುವುದು ಹಾಗೂ ರೋಗದ ಬದುಕುಳಿಯುವಿಕೆಯ ಕುರಿತು ಸಂಶೋಧನೆ ಕೈಗೊಳ್ಳಲಾಗುತ್ತಿದ್ದು, ಪ್ರಗತಿಯಲ್ಲಿರುತ್ತದೆ.

8. ಹಳದಿ ಎಲೆ ರೋಗದ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡುಹಿಡಿಯಲು ಸಹಕಾರಿಯಾಗುತ್ತಿದೆ.

9. ರೋಗ ರಹಿತ ಅಡಿಕೆ ಸಸಿಗಳನ್ನು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಂದ ಉತ್ಪಾದಿಸಲಾಗುತ್ತಿದೆ.

10. **ಹಳದಿ ಎಲೆ ರೋಗ:**

1. ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು

| | | |
|---|---|---|
| | | ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್‌ಗೆ ರೂ.11,952/- ರಿಂದ ರೂ.1,23,483/- ರವರೆಗೆ ಸಹಾಯ ಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದೆ. 2023-24 ನೇ ಸಾಲಿನಲ್ಲಿ 811.11 ಹೆಕ್ಟೇರ್ ಪ್ರದೇಶದ ನಿರ್ವಹಣೆಗೆ 731 ಫಲಾನುಭವಿಗಳಿಗೆ ರೂ. 149.30 ಲಕ್ಷ ಸಹಾಯಧನ ನೀಡಲಾಗಿರುತ್ತದೆ.<br>2. ಸದರಿ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡುಹಿಡಿಯಲು ಸಹಕಾರಿಯಾಗುತ್ತಿದೆ.<br>3. ಹಳದಿ ಎಲೆ ರೋಗ ರಹಿತ ಅಡಿಕೆ ಸಸಿಗಳನ್ನು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಂದ ಉತ್ಪಾದಿಸಲಾಗುತ್ತಿದೆ.<br>4. ಇಲಾಖಾವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br>**11.ಅಡಿಕೆ ಕೊಳೆ ರೋಗ:**<br>ಅಡಿಕೆ ಬೆಳೆ ಸೇರಿದಂತೆ ಸಮಗ್ರ ರೋಗ/ಕೀಟಗಳ |

| | | |
|---|---|---|
| | | ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚದ ರೂ.4,000/-ಗಳಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1,200/-ಗಳಂತೆ 4 ಹೆಕ್ಟೇರ್ ವರೆಗೆ ಗರಿಷ್ಠ ರೂ.4,800/-ಗಳ ಸಹಾಯಧನ ನೀಡಲಾಗುತ್ತಿದೆ. ಈ ಕಾರ್ಯಕ್ರಮಕ್ಕಾಗಿ ಕೊಳೆ ರೋಗ ಬಾಧಿತ ಜಿಲ್ಲೆಗಳಿಗೆ ಒಟ್ಟು ರೂ.45.92ಕೋಟಿಗಳ ಅನುದಾನ ಒದಗಿಸಲಾಗಿದ್ದು, ಈವರೆಗೂ 3809 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿರುತ್ತದೆ.<br><br>**12.** ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ಘಟಕ ವೆಚ್ಚ ಪ್ರತಿ ಹೆಕ್ಟೇರ್ ಗೆ ರೂ.10,000/- ಗಳಲ್ಲಿ ಸಾಮಾನ್ಯ ವರ್ಗದವರಿಗೆ ಶೇ.75 ರಂತೆ ರೂ.7,500/- ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ. 90ರಷ್ಟು ರೂ. 9,000/-ಗಳಂತೆ ಸಸ್ಯ ಸಂರಕ್ಷಣೆ ಔಷಧಿಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಅಡಿಕೆ ಕೊಳೆ ರೋಗ ಬಾಧಿತ ಜಿಲ್ಲೆಗಳಿಗೆ ರೂ.187.00 ಲಕ್ಷಗಳ ಅನುದಾನವನ್ನು ಒದಗಿಸಿ, ಅಂದಾಜು 2671 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ.<br><br>13.ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು NDRF/SDRF **ಮಾರ್ಗಸೂಚಿಯನ್ವಯ ಬೆಳೆ ಹಾನಿಯಾಗಿರುವ ಅಂದಾಜು** 79,123.67 **ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ ರೂ**.22,500/-**ಗಳಂತೆ** ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: HORTI 66 HGM 2025

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು